**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ. 686/2014**

**ಪಿ.ಡಬ್ಲ್ಯೂ: 17**

**ಸಿ.ಡಬ್ಲ್ಯೂ: 18**

**ಹೆಸರು** : ಪ್ರಿಯಾಂಕ ಮೇರಿ ಫ್ರಾನ್ಸಿಸ್

ಗಂಡನ **ಹೆಸರು** : ವಿನೀತ್ ಪುನುತ್

**ವಯಸ್ಸು** : 38 **ವರ್ಷ**

**ಉದ್ಯೋಗ** : ಐ ಎ ಎಸ್ ಅಧಿಕಾರಿ

**ವಾಸಸ್ಥಳ** : ಬೆಂಗಳೂರು

**ದಿನಾಂಕ: 19-09-2022 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ಸ.ಸ.ಅ. ರವರಿಂದ.**

**ನಾನು ದಿ: 04-07-2014 ರಿಂದ 20-04-2015 ರವರೆಗೆ ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದೇನೆ**

ದಿನಾಂಕ: *10-06-2014* ರಂದು ಚಾಸಾ-22 ರವರು ಮನವಿಯನ್ನು ನಮ್ಮ ಇಲಾಖೆಗೆ ಸಲ್ಲಿಸಿದ್ದು, ತಹಶೀಲ್ದಾರ್ ತರೀಕೆರೆಯವರು *14-03-2014* ರಂದು ಒಂದು ದೂರನ್ನು ಸಲ್ಲಿಸಿದ್ದು, ಬಾವಿಕೆರೆ ಗ್ರಾಮ ಪಂಚಾಯಿತಿಯ ಕಾರ್ಯದರ್ಶಿ 2ನೇ ಆರೋಪಿಯಾದ ರಾಮಯ್ಯನವರು ಬಾವಿಕೆರೆ ಗ್ರಾಮ ಪಂಚಾಯಿತಿಯ ಅರಸೀಕೆರೆ ಗ್ರಾಮದ ಸರ್ವೆ ನಂ.7/ಪಿ2 ರಲ್ಲಿ ಕೃಷಿ ಇಲಾಖೆಗೆ ಸಂಬಂಧಪಟ್ಟ ಜಮೀನನ್ನು 1ನೇ ಆರೋಪಿ ಸಂದೇಶ್ ಶೆಟ್ಟಿ ಹಾಗೂ ಸೀತರಾಮ್ ಮತ್ತು ವೆಂಕಟೇಶ್ ರವರ ಹೆಸರಿಗೆ ಅನಧೀಕೃತವಾಗಿ ಅಸಸ್ ಮೆಂಟ್ ರಿಜಿಸ್ಟರ್ ನಲ್ಲಿ ಅವರ ಹೆಸರುಗಳನ್ನು ನಮೂದು ಮಾಡಿದ್ದು, ಇದರ ಬಗ್ಗೆ ಪ್ರಥಮ ವರ್ತಮಾನ ವರದಿ ದಾಖಲು ಮಾಡಿದ್ದು, ಸದರ ದಾಖಲೆಗಳ ಆಧಾರದ ಮೇಲೆ ನಾನು ದಿ: *30-07-2014* ರಂದು 2ನೇ ಆರೋಪಿ ಮೇಲೆ ನ್ಯಾಯಾಲಯಕ್ಕೆ ದೋಷರೋಪಣಾ ಪತ್ರ ಸಲ್ಲಿಸಲು ಅನುಮತಿ ನೀಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಅನುಮತಿ ಪತ್ರವಾಗಿದ್ದು, ಸದರಿ ದಾಖಲೆಯನ್ನು ನಿಪಿ-8 ಎಂದು, ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು.

***ಪಾಟೀ ಸವಾಲು ಃ 1ನೇ ಆರೋಪಿತರ ಪರ ಶ್ರೀ ಕೆ ಎಲ್ ಆರ್  ವಕೀಲರಿಂದ.***

*1*ನೇ ಆರೋಪಿ ಪರ ಪಾಟೀ ಸವಾಲು ಇಲ್ಲ

***ಪಾಟೀ ಸವಾಲು ಃ 2 ನೇ ಆರೋಪಿತರ ಪರ ವಕೀಲರಿಂದ.***

*2*ನೇ ಆರೋಪಿಯು ಯಾವುದೇ ತಪ್ಪನ್ನು ಮಾಡದೇ ಇದ್ದರೂ ಸಹ ನಾನು ನಮ್ಮ ಅಧಿಕಾರಿಗಳ ಒತ್ತಡದ ಮೇರೆಗೆ *2*ನೇ ಆರೋಪಿಯ ವಿರುದ್ದ ದೋಷರೋಪಣಾ ಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಲು ಅನುಮತಿ ನೀಡಿದ್ದೇನೆಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

***(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)***

***ಓ. ಕೇ. ಸ. ಇ. ಎ. ಒ.***

Sd/-

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

***ಪ್ರ.ದ.ನ್ಯಾ.ದಂ. ರವರು, ತರೀಕೆರೆ.***